ಕರ್ನಾಟಕ ಸರಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ನಂ.17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ ಬೆಂಗಳೂರು 560 001. ದೂ. 080–22028032/34/ಫ್ಯಾಕ್ಸ್ 22028041

ದಿನಾಂಕ : 16–02–2015

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | **Welcome Address Chairman, Karnataka State Bar Council Bangalore to Hon'ble Justice Vineet Saran, Judge of Karnataka High Court** | 18–02–2015 **Wednesday at 9-45 AM** | **Court Hall No. 1 Principal bench of the High Court of Karnataka** |
| 2 | **ತತ್ವಪದ ಕಾವ್ಯ–ಶಿವರಾತ್ರಿ ಕುರಿತ ಕಾರ್ಯಕ್ರಮ :**<br><br>ಗೌರವ ಉಪಸ್ಥಿತಿ:<br><br>ಶ್ರೀಮತಿ ಉಮಾಶ್ರೀ, ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು.<br><br>ಡಾ. ಎನ್.ನಾಗಾಂಬಿಕಾ ದೇವಿ, ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ | 17–02–2015 ಮಂಗಳವಾರ ಸಂಜೆ 6–00 ಗಂಟೆಗೆ | ಕಲಾಗ್ರಾಮ, ಮಲ್ಲತ್ತಹಳ್ಳಿ, ಬೆಂಗಳೂರು – 560 056 |

## ಪತ್ರಿಕಾ ಪ್ರಕಟಣೆ

# ಮನೆಯ ಮದ್ದಿಗಾಗಿ ಔಷಧಿ ಸಸ್ಯಗಳ ಕುರಿತ ತರಬೇತಿ ಕಾರ್ಯಕ್ರಮ

**ಬೆಂಗಳೂರು, ಫೆಬ್ರವರಿ 16 (ಕರ್ನಾಟಕ ವಾರ್ತೆ)**

ತೋಟಗಾರಿಕೆ ಇಲಾಖೆಯ ಜೈವಿಕ ಕೇಂದ್ರವು ರೈತರು ಮತ್ತು ವಿದ್ಯಾರ್ಥಿಗಳಿಗಾಗಿ "ಮನೆಯ ಮದ್ದಿಗಾಗಿ ಔಷಧಿ ಸಸ್ಯಗಳು" ಎಂಬ ವಿಷಯದಲ್ಲಿ ಫೆಬ್ರವರಿ 20 ರಂದು ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಈ ತರಬೇತಿಯಲ್ಲಿ ಔಷಧಿ ಸಸ್ಯಗಳ ಪ್ರಾಮುಖ್ಯತೆ, ಉಪಯುಕ್ತತೆ ಬಗ್ಗೆ ಮಾಹಿತಿ ನೀಡಲಾಗುವುದು.

ಆಸಕ್ತಿಯುಳ್ಳವರು ರೂ 300/- ಗಳನ್ನು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಸಮನ್ವಯಾಧಿಕಾರಿ) ಹುಳಿಮಾವು, ಬೆಂಗಳೂರು ಇವರ ಕಚೇರಿಗೆ ಪಾವತಿಸಿ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ 26582775, 26584904 ಅಥವಾ ಇ ಮೇಲ್ Sadh.co2014@gmail.com ಅನ್ನು ವೀಕ್ಷಿಸಬಹುದಾಗಿದೆ.

ಬಿಜಿಪಿ:ಜೆಪಿಆರ್

# ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರಕ್ಕೆ ರೂ. 100 ಕೋಟಿ ಅನುದಾನಕ್ಕೆ ಮನವಿ – ಸುಭಾಸ್ ಎಸ್. ಛಾಯಾಗೋಳ

**ಬೆಂಗಳೂರು, ಫೆಬ್ರವರಿ 16 (ಕರ್ನಾಟಕ ವಾರ್ತೆ)**

ತಮಿಳುನಾಡು ರಾಜ್ಯದ ಕನ್ನಡ ಹೆಚ್ಚು ಮಾತನಾಡುವ ಕೆಲವು ಪ್ರದೇಶಗಳ ಶಾಲೆಗಳನ್ನು ತಮಿಳು ಭಾಷೆಯನ್ನು ಪ್ರಥಮ ಭಾಷೆಯನ್ನಾಗಿ ಕಲಿಯಬೇಕು ಎಂದು ಒತ್ತಡ ಹೇರಿರುವುದು ಗಮನಕ್ಕೆ ಬಂದಿದ್ದು, ತಮಿಳುನಾಡು ಸರ್ಕಾರದ ಈ ನಿರ್ಧಾರವನ್ನು ಪ್ರಶ್ನಿಸಿ ನ್ಯಾಯಲಯದಲ್ಲಿ ರಿಟ್ ಅರ್ಜಿ ಸಲ್ಲಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀ ಸುಭಾಸ್ ಎಸ್. ಛಾಯಾಗೋಳ ಅವರು ತಿಳಿಸಿದರು.

ವಿಕಾಸಸೌಧದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ತಮಿಳು ನಾಡಿನ ತಾಳವಾಡಿ ಫರ್ಕಾ ಪ್ರದೇಶಗಳಲ್ಲಿ ಕನ್ನಡ ಕಲಿಯುವ ವಿದ್ಯಾರ್ಥಿಗಳಿಗೆ ತೊಂದರೆಯಾಗಿದ್ದು, ಈ ಬಗ್ಗೆ ಮಾಹಿತಿ ಸಂಗ್ರಹಿಸಿ ಕಾನೂನು ತಜ್ಞರ ಸಲಹೆ ಪಡೆದು ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಲ್ಲಿಸಲಾಗುವುದು ಎಂದರು.

ಪ್ರೊ. ಬರಗೂರು ರಾಮಚಂದ್ರಪ್ಪ ಹಾಗೂ ಮಾಜಿ ಶಾಸಕರಾದ ಶ್ರೀ ವಾಟಾಳ್ ನಾಗರಾಜ್ ಅವರು ಸರ್ಕಾರಕ್ಕೆ ಸಲ್ಲಿಸಿರುವ ಗಡಿನಾಡು ಅಧ್ಯಯನ ವರದಿಯನ್ನು ಓದಿದ್ದು ಅನುಷ್ಠಾನಗೊಳಿಸಲು ಕ್ರಮ ಜರುಗಿಸಲಾಗುವುದು ಎಂದ ಶ್ರೀ ಸುಭಾಸ್ ಎಸ್ ಛಾಯಾಗೋಳ ಅವರು ಈ ಸಂಬಂಧ ಮುಂದಿನ ಆಯವ್ಯಯದಲ್ಲಿ 100 ಕೋಟಿ ರೂ. ಅನುದಾನವನ್ನು ಪ್ರಾಧಿಕಾರಕ್ಕೆ ಒದಗಿಸುವಂತೆ ಮುಖ್ಯಮಂತ್ರಿ ಅವರಲ್ಲಿ ಮನವಿ ಸಲ್ಲಿಸಲಾಗುವುದು ಎಂದರು.

ಗಡಿಭಾಗದಲ್ಲಿ ಸಾಂಸ್ಕೃತಿಕ ಭವನ ನಿರ್ಮಾಣ, ಗ್ರಂಥಾಲಯಗಳನ್ನು ಪ್ರಾರಂಭಿಸುವುದು, ಕನ್ನಡ ಶಾಲೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಒಗದಿಸಲು ಪ್ರಾಧಿಕಾರವು ಹಲವು ಯೋಜನೆಗಳನ್ನು ಹಮ್ಮಿಕೊಂಡು ಪ್ರಾಧಿಕಾರದಲ್ಲಿ ಈಗಿರುವ 80 ಲಕ್ಷ ರೂ ಅನುದಾನದಲ್ಲಿ ಚಿತ್ರದುರ್ಗ, ಯಾದಗಿರಿ, ರಾಯಚೂರು, ವಿಜಯಾಪುರ, ಬೀದರ್, ಗುಲ್ಬರ್ಗಾ ಜಿಲ್ಲೆಗಳಿಗೆ ಹಣ ಬಿಡುಗಡೆ ಮಾಡಲಾಗಿದೆ ಎಂದ ಪ್ರಾಧಿಕಾರದ ಅಧ್ಯಕ್ಷರು ಗಡಿಭಾಗಗಳಲ್ಲಿ ಈ ಹಿಂದೆ ಕನ್ನಡ ಪರ ಕೆಲಸಗಳು ಹೆಚ್ಚಾಗಿ ನಡೆದಿರುವುದು ಕಂಡು ಬಂದಿದೆ ಎಂದರು.

ಕೆಪಿಪಿ:ಬಿಜಿಪಿ:ಜಿಪಿಆರ್.